ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹದಿನಾಲ್ಕನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 21ನೇ ಡಿಸೆಂಬರ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎಲ್.ಎ. ರವಿಸುಬ್ರಮಣ್ಯ (ಅಧ್ಯಕ್ಷರು, ಅಧೀನ ಶಾಸನ ರಚನಾ ಸಮಿತಿ) ಅವರು ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯ 2021-22ನೇ ಸಾಲಿನ ಐವತ್ತೆರಡನೇ ವರದಿಯನ್ನೊಪ್ಪಿಸುವುದು.

3. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:-

ಅ) 2022ನೇ ಸಾಲಿನ ಕರ್ನಾಟಕ ಸ್ಟಾಂಪು (ನಾಲ್ಕನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು – ಮಹಾರಾಷ್ಟ್ರ, ಕರ್ನಾಟಕ ಹಾಗೂ ಕೇರಳ ರಾಜ್ಯಗಳ ನಡುವಿನ ಗಡಿ ವಿವಾದದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

... 2/ ..

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಕೆ.ವೈ. ನಂಜೇಗೌಡ ಅವರು** – ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯ ಹಳೆ ಕಟ್ಟಡವನ್ನು ನೆಲಸಮಗೊಳಿಸಿ ಸುಸಜ್ಜಿತ ಹೊಸ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

2) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಸಾ.ರಾ. ಮಹೇಶ್ ಹಾಗೂ ಎಂ. ಅಶ್ವಿನ್ ಕುಮಾರ್ ಅವರುಗಳು** – ಇತ್ತೀಚೆಗೆ ಕೊಬ್ಬರಿ ಬೆಲೆಯ ಕುಸಿತದಿಂದಾಗಿ ತೆಂಗು ಬೆಳೆಗಾರರು ಆರ್ಥಿಕ ಸಂಕಷ್ಟಕ್ಕೆ ಈಡಾಗಿರುವುದರಿಂದ ಕೊಬ್ಬರಿಗೆ ಕನಿಷ್ಟ ಬೆಂಬಲ ಬೆಲೆಯನ್ನು ಹಾಗೂ ಸಹಾಯಧನವನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

3) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ಬೇಲೂರು ವಿಧಾನಸಭಾ ಕ್ಷೇತ್ರದಲ್ಲಿ ಕುಸಿದಿರುವ ದೊಡ್ಡಕೋಡಿಹಳ್ಳಿ ಕೆರೆಯ ಏರಿ ಭಾಗವನ್ನು ದುರಸ್ತಿಗೊಳಿಸಲು ತಕ್ಷಣ ತಾತ್ಕಾಲಿಕ ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಈಗಾಗಲೇ ಕುಸಿದಿರುವ ಇತರೆ ಕೆರೆಗಳ ಏರಿ ಭಾಗಗಳಿಗೆ ಸಂಬಂಧಿಸಿದಂತೆ ಶಾಶ್ವತ ಕಾಮಗಾರಿ ಕೈಗೊಳ್ಳುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

4) **ಡಾ: ಅಜಯ್ ಧರ್ಮಸಿಂಗ್ ಅವರು** – ರಾಜ್ಯದ ವಿವಿಧ ಜಿಲ್ಲೆಯ ಪ್ರವಾಸಿ ತಾಣದಲ್ಲಿ ಪ್ರವಾಸೋದ್ಯಮ ಇಲಾಖೆಯ ಪ್ರವಾಸಿ ಮಿತ್ರರಾಗಿ (ಟೂರಿಸ್ಟ್ ಪೊಲೀಸ್) ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ನಿರಂತರ ಕರ್ತವ್ಯಕ್ಕೆ ನೇಮಿಸಿ, ಕರ್ತವ್ಯ ಭತ್ಯೆ ಹೆಚ್ಚಳ ಮಾಡಿ, ಉದ್ಯೋಗ ಭದ್ರತೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

5) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ ಅವರು** – ಆಡಳಿತ ಹಿತದೃಷ್ಟಿಯಿಂದ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಹೊಸದಾಗಿ ಜಿಲ್ಲೆಗಳನ್ನು ಮಾಡುವ ಸಂದರ್ಭದಲ್ಲಿ ಇಂಡಿ, ಚಡಚಣ, ಆಲಮೇಲ, ಸಿಂಧಗಿ, ದೇವರಹಿಪ್ಪರಗಿ ತಾಲ್ಲೂಕುಗಳನ್ನು ಒಗ್ಗೂಡಿಸಿ ಇಂಡಿ ಜಿಲ್ಲಾ ಕೇಂದ್ರವನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ರವೀಂದ್ರ ಶ್ರೀಕಂಠಯ್ಯ ಅವರು** – ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಇತ್ತೀಚೆಗೆ ಸುರಿದ ಅಕಾಲಿಕ ಮಳೆಯಿಂದಾಗಿ ಕೆರೆಗಳು ಕೋಡಿಬಿದ್ದು, ಸಂಪೂರ್ಣವಾಗಿ ಹಾಳಾಗಿರುವ ತೂಬುಗಳನ್ನು ದುರಸ್ತಿ ಮಾಡುವ ಬಗ್ಗೆ ಹಾಗೂ ಮರು ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

7) ಶ್ರೀ ಮಾನೆ ಶ್ರೀನಿವಾಸ ಅವರು – ರಾಜ್ಯಾದ್ಯಂತ ಸಂಪೂರ್ಣವಾಗಿ ಬತ್ತಿ ಹೋಗಿರುವ ಕೆರೆ ಕಟ್ಟೆಗಳನ್ನು ಸಮೀಕ್ಷೆ ಮಾಡಿ, ಸದರಿ ಕೆರೆ ಜಾಗದಲ್ಲಿ ನಿರ್ಮಾಣವಾಗಿರುವ ಮನೆಗಳು ಹಾಗೂ ಸರ್ಕಾರಿ ಕಟ್ಟಡಗಳ ಹೆಸರಿಗೆ ಪಹಣಿ ಪತ್ರಿಕೆಯಲ್ಲಿ ಹೆಸರು ದಾಖಲಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) ಶ್ರೀ ಪಿ. ರಾಜೀವ್ ಅವರು – ರಾಜ್ಯದಲ್ಲಿ ನವೆಂಬರ್ 2022ರ ಅಂತ್ಯಕ್ಕೆ ಪರಿಶಿಷ್ಟ ವರ್ಗ ಹಾಗೂ ಇತರೆ ಪಾರಂಪರಿಕ ಅರಣ್ಯ ವಾಸಿಗಳಿಗೆ (ಒಟಿಎಫ್‌ಡಿ) ವೈಯಕ್ತಿಕ ಅರಣ್ಯ ಹಕ್ಕು ಅರ್ಜಿಗಳ ವಿಲೇವಾರಿ ಮತ್ತು ಫಲಾನುಭವಿಗಳಿಗೆ ನೀಡಲಾಗುವ ಸೌಲಭ್ಯಗಳ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

9) ಶ್ರೀ ಪಿ.ಟಿ. ಪರಮೇಶ್ವರ ನಾಯಕ್ ಅವರು – ರೈತರ ಕೊಳವೆ ಬಾವಿ ಮತ್ತು ಪಂಪ್‌ಸೆಟ್‌ಗಳಿಗೆ ವಿದ್ಯುತ್ ಪಡೆಯಲು ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಜೆಸ್ಕಾಂಗೆ ಸಲ್ಲಿಸಿರುವ ರೈತರ ಅರ್ಜಿಗಳನ್ನು ವಿಲೇವಾರಿ ಮಾಡಿ ಸಕ್ರಮಗೊಳಿಸುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

10) ಶ್ರೀ ಎಂ.ವೈ. ಪಾಟೀಲ ಅವರು – ಅಫಜಲ್‌ಪುರ ಮತಕ್ಷೇತ್ರದಲ್ಲಿ ಕುಸಿಯುವ ಹಂತದಲ್ಲಿರುವ ಶಾಲಾ ಕೊಠಡಿಗಳನ್ನು ಪುನರ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

11) ಶ್ರೀ ಅಬ್ಬಯ್ಯ ಪ್ರಸಾದ ಅವರು – ಕೇಂದ್ರ ಸರ್ಕಾರದ ರಾಷ್ಟ್ರೀಯ ಆಯುಷ್ ಅಭಿಯಾನ (ಎನ್.ಹೆಚ್.ಎಂ.) ಯೋಜನೆಯಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ತಜ್ಞ ವೈದ್ಯರು, ಅರೆ ತಜ್ಞ ವೈದ್ಯಕೀಯ ಸಿಬ್ಬಂದಿಯನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

12) ಶ್ರೀ ಕೃಷ್ಣ ಬೈರೇಗೌಡ ಅವರು – ಬೆಂಗಳೂರು ನಗರ ಜಿಲ್ಲೆಯ ಯಲಹಂಕ ತಾಲ್ಲೂಕು ಕಟ್ಟಿಗೇನಹಳ್ಳಿಯಲ್ಲಿ ಖಾಸಗಿ ಬಡಾವಣೆಯನ್ನು ನಿರ್ಮಿಸಿ ಬಿಬಿಎಂಪಿಯ ನಕಲಿ ಖಾತೆಗಳನ್ನು ಸೃಷ್ಟಿಸಿ, ನಿವೇಶನಗಳ ಪರಭಾರೆ ನೊಂದಣಿಯನ್ನು ಮಾಡಿ ಅಮಾಯಕ ಖರೀದಿದಾರರಿಗೆ ಮೋಸ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

13) ಶ್ರೀ ಎಂ. ಕೃಷ್ಣಾರೆಡ್ಡಿ ಅವರು – ಇಂದಿರಾ ಆವಾಸ್ ಯೋಜನೆಯಡಿ ಮನೆಗಳನ್ನು ಪಡೆದ ಫಲಾನುಭವಿಗಳಿಗೆ ನಿಗದಿತ ಪ್ರೋತ್ಸಾಹ ಧನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ
